ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಉದ್ಯಮಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1570 (1851) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿ ಹಲವಾರು ಸಾರ್ವಜನಿಕ ಉದ್ಯಮಗಳಿದ್ದು, ಅದರಲ್ಲಿ ಕೆಲವು ಮಾತ್ರ ಲಾಭಗಳಿಸುತ್ತಿದ್ದು, ಉಳಿದವುಗಳು ದಿವಾಳಿ ಸ್ಥಿತಿಯಲ್ಲಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; ಹೆಸರಿನೊಂದಿಗೆ ವಿವರ ನೀಡುವುದು ;

(ಇ) ಈ ಒಟ್ಟು ಉದ್ಯಮಗಳಲ್ಲಿ ಲಾಭದಲ್ಲಿ ಪಡೆಯುತ್ತಿರುವ ಹಾಗೂ ನಷ್ಟ ಅನುಭವಿಸುತ್ತಿರುವ ಉದ್ಯಮಗಳ ಪಟ್ಟಿ ನೀಡುವುದು ;

(ಈ) ನಷ್ಟ ಅನುಭವಿಸುತ್ತಿರುವ ಉದ್ಯಮಗಳನ್ನು ಪುನಃಶ್ಚೇತನಗೊಳಿಸಲು ಪರ್ಯಾಯ ಮಾರ್ಗದ ಬಗ್ಗೆ ಸರ್ಕಾರ ಯೋಚಿಸಿದೆಯೇ ? (ವಿವರ ನೀಡುವುದು)